**ದಿ.02.04.2026 ರಂದುಸಾಕ್ಷಿಯನ್ನು ಪುನಃ ಕರೆಯಿಸಿ ಪ್ರಮಾಣ ಬೋಧಿಸಲಾಯಿತು.**
**ಮುಂದುವರೆದ ಪಾಟೀ ಸವಾಲು : ಶ್ರೀ. ಆರ್.ಆರ್.ಎಂ, ಆರೋಪಿತರ ಪರ ವಕೀಲರಿಂದ**

ದೂರು ನೀಡುವ ಸಂದರ್ಭದಲ್ಲಿ ದಾಖಲೆಗಳನ್ನು ನೀಡಿರುವುದಿಲ್ಲ. ದೂರು ನೀಡುವ ಪೂರ್ವ ದಲ್ಲಾಗಲೀಅಥವಾ ದೂರು ನೀಡುವ ಸಂದರ್ಭದಲ್ಲಿಗಲೀ ನನ್ನನ್ನಾಗಲೀ ಅಥವಾ ಆರೋಪಿತರ ನ್ನಾಗಲೀ ಹಾಗೂ ಮೇಲಾಧಿಕಾರಿಗಳನ್ನಾಗಲೀ ದಾಖಲೆಗಳನ್ನು ಹಾಜರುಪಡಿಸುವಂತೆ ಕೇಳಿರುವುದಿಲ್ಲ. ಪ್ರಾಥಮಿಕ ವಿಚಾರಣೆಯನ್ನು ಮಾಡದೇ ನಾನು ದೂರನ್ನು ನೀಡಿದ ನಂತರ ಪೊಲೀಸರು ಪ್ರ.ವ. ವರದಿಯನ್ನು ದಾಖಲು ಮಾಡಿರುತ್ತಾರೆ ಎಂದರೆ ಸಾಕ್ಷಿ ಇರಬಹುದು ಎಂದು ಹೇಳುತ್ತಾರೆ. ಪ್ರ.ವ. ವರದಿಯನ್ನು ದಾಖಲು ಮಾಡುವ ಸಮಯದಲ್ಲಿ ಪೊಲೀಸರು ಯಾವುದೇ ದಾಖಲೆಗಳನ್ನು ಪರಿಶೀಲನೆ ಮಾಡಿಲ್ಲ ಎಂದರೆ ನನಗೆ ಗೊತ್ತಿಲ್ಲ. ಪೊಲೀಸರು ದಾಖಲೆಗಳನ್ನು ಹಾಜರುಪಡಿಸುವಂತೆ ನನಗೆ ನೋಟಿಸ್ ನೀಡಿರುವುದಿಲ್ಲ. ಆದರೆ ಮಹಜರ್ ಸಂದರ್ಭದಲ್ಲಿ ನಾನು ದಾಖಲೆಗಳನ್ನು ಹಾಜರು ಪಡಿಸಿರುತ್ತೇನೆ. ದಾಖಲೆಗಳನ್ನು ಪೊಲೀಸರು ಪಡೆದ ಬಗ್ಗೆ ಮಹಜರಿನಲ್ಲಿ ನಮೂದು ಮಾಡಿಲ್ಲ ಎಂದರೆ ಸಾಕ್ಷಿ ಆ ಬಗ್ಗೆ ನನಗೆ ಗೊತ್ತಿಲ್ಲ ಎಂದು ಹೇಳುತ್ತಾರೆ. ಮೇಲಾಧಿಕಾರಿಗಳಿಂದ ಅಂಚೆ ಮೂಲಕ ದಾಖಲೆಗಳು ನನಗೆ ಬಂದಿದ್ದು, ಅವುಗಳನ್ನು ಪೊಲೀಸರು ಮಹಜರ್ ಕ್ರಮ ಜರುಗಿಸಿರುವ ಸಂದರ್ಭದಲ್ಲಿ ಪೊಲೀಸರಿಗೆ ನೀಡಿರುತ್ತೇನೆ. ಸದರಿ ಅಂಚೆ ಲಕೋಟೆಯನ್ನು ಪೊಲೀಸರಿಗೆ ನೀಡಿರುವ

ಬಗ್ಗೆ ನನಗೆ ನೆನಪಿಲ್ಲ. ನಾನು ಮಾನ್ಯ ಉಚ್ಚ ನ್ಯಾಯಾಲಯದ ಆದೇಶವನ್ನು ಉಲ್ಲಂಘನೆ ಮಾಡಿರುವ ಬಗ್ಗೆ ಆರೋಪಿತರು ಮಾನ್ಯ ಉಚ್ಚ ನ್ಯಾಯಾಲಯಕ್ಕೆ ಮೆಮೋವನ್ನು ಸಲ್ಲಿಸಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ. ನಾನು ಮಾನ್ಯ ಉಚ್ಚ ನ್ಯಾಯಾಲಯದ ಆದೇಶವನ್ನು ಉಲ್ಲಂಘನೆ ಮಾಡಿದರೆ ನನ್ನ ಮೇಲೆ ಸೂಕ್ತ ಕಾನೂನು ಕ್ರಮವನ್ನು ತೆಗೆದುಕೊಳ್ಳಬಹುದು ಎಂದು ಆದೇಶವಾಗಿರುತ್ತದೆ ಎಂದರೆ ಸಾಕ್ಷಿ ಆ ಬಗ್ಗೆ ನನಗೆ ಗೊತ್ತಿಲ್ಲ ಎಂದು ಹೇಳುತ್ತಾರೆ. ವಿಚಾರಣಾ ವರದಿ ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ರದ್ದಾಗಿರುತ್ತದೆ ಎಂದೆ ಸಾಕ್ಷಿ ಆ ಸಂದರ್ಭದಲ್ಲಿ ನಾನು ಆಡಳಿತಾಧಿಕಾರಿಯಾಗಿರಲಿಲ್ಲ ಎಂದು ಹೇಳುತ್ತಾರೆ. ಸದರಿ ರಿಟ್ ನಂ.19836/2019 ಆಗಿತ್ತು ಎಂದರೆ ಸಾಕ್ಷಿ ನನಗೆ ತಿಳಿದಿಲ್ಲ ಎಂದು ಹೇಳುತ್ತಾರೆ. ಸದರಿ ವಿಚಾರಣಾ ವರದಿಯು ರದ್ದಾಗಿರುವ ಬಗ್ಗೆ ಮಾಹಿತಿ ನನಗೆ ಇರುವುದಿಲ್ಲ. ನಾನು ಆಡಳಿತಾಧಿಕಾರಿಯಾಗಿದ್ದ ಸಮಯದಲ್ಲಿ ಬ್ಯಾಂಕ್ ವ್ಯವಹಾರಗಳನ್ನು ನಡೆಸಲು ಹೋದಾಗ ಆರೋಪಿತರು ನನಗೆ ಅವಕಾಶ ನೀಡಲಿಲ್ಲ ಹಾಗಾಗಿ ನಾನು ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ಮೇಲಾಧಿಕಾರಿಗಳ ಅನುಮತಿ ಮೇರೆಗೆ ಒಂದು ರಿಟ್ ಅರ್ಜಿಯನ್ನು ಸಲ್ಲಿಸಿರುತ್ತೇನೆ. ಸದರಿ ರಿಟ್ ಅರ್ಜಿ ವಜಾ ಆಗಿರುತ್ತದೆ ಎಂದರೆ ಸರಿಯಲ್ಲ. ಸಾಕ್ಷಿ ಮುಂದುವರೆದು ಆ ಸಂದರ್ಭದಲ್ಲಿ ನಾನು ಆಡಳಿತಾಧಿಕಾರಿಯಾಗಿರಲಿಲ್ಲ ಎಂದು ಹೇಳುತ್ತಾರೆ. ಸದರಿ ರಿಟ್ ಅರ್ಜಿಯ ಆದೇಶವನ್ನು ಮತ್ತು ಆರೋಪಿತರು ಸಲ್ಲಿಸಿದ ಅರ್ಜಿಯ ಆದೇಶವನ್ನು ನಾನು ಪ್ರಶ್ನಿಸಿರುವ ಬಗ್ಗೆ ನನಗೆ ನೆನಪಿಲ್ಲ. ಆರೋಪಿತರು ಸಲ್ಲಿಸಿದ ರಿಟ್ ಅರ್ಜಿಯಲ್ಲಿ ನಾನು ಸಹ ಪಕ್ಷಗಾರ ಎಂದರೆ ನನಗೆ ಗೊತ್ತಿಲ್ಲ. ನಾನು ಎ.ಜೆ. ರವರಿಗೆ ಅರ್ಜಿಯನ್ನು ಸಲ್ಲಿಸಿ ವೈಯಕ್ತಿಕವಾಗಿ ಯಾವುದೇ ಆದೇಶವನ್ನು ಪಡೆದಿರುವುದಿಲ್ಲ. ನಾನು ಪೊಲೀಸರೊಂದಿಗೆ ಶಾಮೀಲಾಗಿ ಎ.ಜೆ. ರವರ ಆದೇಶವನ್ನು ಪಡೆದಿರುತ್ತೇನೆ ಎಂದರೆ ಸರಿಯಲ್ಲ. ವಿಚಾರಣಾ ವರದಿಯ ಅಂಶಗಳು ನನಗೆ ವೈಯಕ್ತಿಕವಾಗಿ ಗೊತ್ತಿಲ್ಲ. ಒಂದನೇ ಆರೋಪಿಯ ತಂಗಿ ಅನಿತಾ ಪ್ರಸಾದ್ ರವರ ಜೊತೆ ಶಾಮೀಲಾಗಿ ನಾನು ಸುಳ್ಳು ವರದಿಗಳನ್ನು ಪಡೆದು ಕೊಂಡು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನಾನು ಚಾಸಾ-6ರವರ ಜೊತೆ

ಶಾಮೀಲಾಗಿ ಆರೋಪಿತರಿಗೆ ತೊಂದರೆ ಕೊಡಲು ಮೇಲಾಧಿಕಾರಿಗಳ ಮಾತನ್ನು ಕೇಳಿಕೊಂಡು ಸುಳ್ಳು ದೂರು ನೀಡಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಆರೋಪಿತರು ಯಾವುದೇ ಹಣವನ್ನು ದುರುಪಯೋಗಪಡಿಸಿಕೊಳ್ಳದಿದ್ದರೂ ಸಹ ಅವರ ವಿರುದ್ಧ ಸುಳ್ಳು ದೂರು ನೀಡಿರುತ್ತೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆಃ ಇಲ್ಲ.**

(**ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು.**)

**ಓ.ಹೇ.ಕೇ.ಸ.ಇದೆ**

**3ನೇ ಎ.ಸಿ.ಜೆ.ಎಮ್.ನ್ಯಾ.**
**ಬೆಂಗಳೂರು.**